# ಪ್ರ ದ ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ

## ಸಿ ಸಿ ನಂಃ 786/2024

ಸಾಕ್ಷಿಯ ಹೆಸರು: ಚಂದ್ರಪ್ಪ
ತಂದೆ / ಗಂಡನ ಹೆಸರು : ಲೇಟ್ ಜವರಯ್ಯ
ವಯಸ್ಸು : 62
ಉದ್ಯೋಗ : ನಿವೃತ್ತ ಪಿ ಎಸ್ ಐ
ವಾಸ ಸ್ಥಳ : ಕುಶಾಲನಗರ

ಚಾಸಾ 21ಃ
ಪ್ರಾಸಾ ಃ 3

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 07.02.2026**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನಾನು ಜೂನ್ 2022 ರಿಂದ ರಿಂದ ಜುಾನ್ 2025 ರವರೆಗೆ ಕುಶಾಲನಗರದ ಸಂಚಾರ ಪೋಲಿಸ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 21.01.2024 ರಂದು ನಾನು ಠಾಣೆಯಲ್ಲಿರುವಾಗ ಚಾಸಾ 22 ರವರು ನೀಡಿದ ಜ್ಞಾಪನಾ ಪತ್ರವನ್ನು ಸ್ವೀಕರಿಸಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ರಾತ್ರಿ 8.00 ಗಂಟೆಗೆ ಚಾಸಾ 2 ರವರು ಠಾಣೆಗೆ ಹಾಜರಾಗಿ ನೀಡಿದ ಮುದ್ರಿತ ಪುಕರನ್ನು ಸ್ವೀಕರಿಸಿಕೊಂಡು ಈ ಮೊದಲು ವರದಿ ಪ್ರಕರಣಕ್ಕೆ ಕಲಂ 304 ಎ ಅಳವಡಿಸಿಕೊಂಡು ತನಿಖೆಯನ್ನು ಮುಂದುವರೆಸಲು ಮನವಿ ಪತ್ರವನ್ನು ಸಲ್ಲಿಸಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಚಾಸಾ 22 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ.

ಸಾಕ್ಷಿಗೆ ಚಾಸಾ 22 ರವರು ನೀಡಿದ ಜ್ಞಾಪನಾವನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಜ್ಞಾಪನಾವನ್ನು ನಿಪಿ 3

ಎಂದು, ಸಾಕ್ಷಿಯ ಸಹಿಯನ್ನು ನಿಪಿ 3ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ಚಾಸಾ 2 ರವರು ನೀಡಿದ ದೂರನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದೂರನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ನ್ಯಾಯಾಲಯಕ್ಕೆ ಸಲ್ಲಿಸಿದ ಮನವಿ ಪತ್ರವನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಮನವಿ ಪತ್ರವನ್ನು ನಿಪಿ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5ಎ ಎಂದುಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ ಆರ್ ಜೆ ವಕೀಲರಿಂದ**

ನಿಪಿ 3 ರಿಂದ 5 ನ್ನು ನಾನು ಈ ಪ್ರಕರಣಕ್ಕೆ ಪೂರಕವಾದಂತೆ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೆ ಸಂಬಂದ ಇರುವುದಿಲ್ಲ ಎಂದರೆ ಸರಿಯಲ್ಲ. ದೂರುದಾರರಿಗೆ ಸಹಾಯವಾಗಲೆಂದು ನಿಪಿ 3 ರಿಂದ 5 ನ್ನು ಸೃಷ್ಟಿಸಿಕೊಂಡು ಸುಳ್ಳು ಸಾಕ್ಶ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾದಂ, ಕುಶಾಲನಗರ.